# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಜಲಸಂಪನ್ಮೂಲ ಇಲಾಖೆಯ ಕರ್ನಾಟಕ ನೀರಾವರಿ ನಿಗಮಕ್ಕೆ ಸೇರಿದ ಬಳ್ಳಾರಿ ಜಿಲ್ಲೆಯ ಹಡಗಲಿ ತಾಲ್ಲೂಕಿನ ಅಲ್ಲೀಪುರ (ತಿಮ್ಲಾಪುರ -63) ಗ್ರಾಮದಲ್ಲಿನ ಉದ್ಯಾನದ ನಿವೇಶನದಲ್ಲಿ 60 ಮೀ X 24ಮೀ ಅಳತೆಯ ಜಾಗವನ್ನು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆಗೆ ಹಸ್ತಾಂತರಿಸುವ ಕುರಿತು.

ಓದಲಾಗಿದೆ:

1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಇವರ ಪತ್ರ ಸಂಖ್ಯೆ: ಕನೀನಿ/ ಕೇಕ/ ಸಿ-11/ಎ.ಎಸ್.ಟಿ/ನಿ. ಆಸ್ತಿ/485/2016-2017/7244, ದಿನಾಂಕ : 22.03.2018 ಮತ್ತು ದಿನಾಂಕ : 14.02.2022.
2. ಸರ್ಕಾರದ ಅಧಿಸೂಚನೆ ಸಂಖ್ಯೆ: RD-09 LGP 2015 ದಿನಾಂಕ: 09.06.2015.
3. ಸರ್ಕಾರದ ಆದೇಶ ಸಂಖ್ಯೆ: ಆರ್.ಡಿ.32 ಎಲ್.ಜಿ.ಪಿ.2019 ದಿನಾಂಕ: 01.02.2021.

****

**ಪ್ರಸ್ತಾವನೆ:**

ಮೇಲೆ ಓದಲಾದ (1) ರ ಪತ್ರಗಳಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ಇವರು, ನೀರಾವರಿ ಕೇಂದ್ರ ವಲಯ, ಮುನಿರಾಬಾದ್ ಕಛೇರಿಯ ಅಧೀನದಲ್ಲಿ ಬರುವ ಪುನರ್ ವಸತಿ ಮತ್ತು ಪುನರ್ ನಿರ್ಮಾಣ ಉಪ ವಿಭಾಗ, ಮುಂಡರಗಿ ಕಛೇರಿಯ ಸಿಂಗಟಾಲೂರು ಏತ ನೀರಾವರಿ ಯೋಜನೆಯ ಬ್ಯಾರೇಜ್ ನಿರ್ಮಾಣದ ಹಿನ್ನೀರಿನಿಂದ ಬಳ್ಳಾರಿ ಜಿಲ್ಲೆಯ ಹಡಗಲಿ ತಾಲ್ಲೂಕಿನ ಅಲ್ಲೀಪುರ (ತಿಮ್ಲಾಪುರ-63) ಗ್ರಾಮವು ಮುಳುಗಡೆಯಾಗಿದ್ದು, ಸಂತ್ರಸ್ಥರಿಗೆ ಪುನರ್ ವಸತಿ ಕೇಂದ್ರ ಕಲ್ಪಿಸಲು ಸ್ವಾಧೀನಪಡಿಸಿಕೊಂಡ ಭೂಮಿಯಲ್ಲಿ ಈಗಾಗಲೇ ಹಿರಿಯ ಪ್ರಾಥಮಿಕ ಶಾಲೆಗೆ ಜಾಗವನ್ನು ಕಲ್ಪಿಸಲಾಗಿದೆ ಎಂದು ತಿಳಿಸಿರುತ್ತಾರೆ.

ಮುಂದುವರೆದು, ಕೇಂದ್ರ ಸರ್ಕಾರವು 8ನೇ ತರಗತಿ ಹೊಂದಿರುವ ಹಿರಿಯ ಪ್ರಾಥಮಿಕ ಶಾಲೆಗಳನ್ನು ಪ್ರೌಢ ಶಾಲೆಗಳಾಗಿ ಉನ್ನತೀಕರಿಸಲು ಉದ್ದೇಶಿಸಿದ್ದು, ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ಕರ್ನಾಟಕದಡಿಯಲ್ಲಿ ಉನ್ನತೀಕರಿಸಿದ ಪ್ರೌಢ ಶಾಲೆಯ ಕಟ್ಟಡ ನಿರ್ಮಾಣಕ್ಕೆ ಈಗಾಗಲೇ ಹೊಂದಿರುವ ಶಾಲಾ ಕಟ್ಟಡಗಳ ಪಕ್ಕದಲ್ಲಿ ಹೆಚ್ಚುವರಿ ತರಗತಿಯ ಕಟ್ಟಡಗಳ ನಿರ್ಮಾಣಕ್ಕೆ ಉದ್ಯಾನಕ್ಕೆ ಮೀಸಲಿಡಲಾದ ಜಾಗದಲ್ಲಿ ವಿಸ್ತೀರ್ಣ 60 ಮೀಟರ್ X 24 ಮೀಟರ್ ಜಾಗವನ್ನು (14 ಗುಂಟೆ 04 ಅಣೆ) ಕರ್ನಾಟಕ ಭೂ ಮಂಜೂರಾತಿ ನಿಯಮಗಳು 1969 ರ ನಿಯಮ 22 (ಎ) (1) (4) ರ ಮಾರ್ಗಸೂಚಿಯನ್ವಯ ಮಾರುಕಟ್ಟೆಯ ಬೆಲೆ ಶೇ.50% ರಷ್ಟು ಅಂದರೆ ರೂ 61,302/- ಗಳ ಮೊತ್ತಕ್ಕೆ ಶಿಕ್ಷಣ ಇಲಾಖೆಗೆ ಹಸ್ತಾಂತರಿಸಲು ದಿನಾಂಕ:21.02.2018 ರಂದು ನಡೆದ ಕರ್ನಾಟಕ ನೀರಾವರಿ ನಿಗಮದ ನಿರ್ದೇಶಕರ ಮಂಡಳಿ 83ನೇ ಸಭೆಯಲ್ಲಿ ಅನುಮೋದಿಸಿರುವುದಾಗಿ ತಿಳಿಸಿ, ನಿಗಮದ ನಿಯಮಾನುಸಾರ ಹಸ್ತಾಂತರಿಸಲು ವ್ಯವಸ್ಥಾಪಕ ನಿರ್ದೇಶಕರು, ಅನುಮತಿ ಕೋರಿರುತ್ತಾರೆ.

ಮೇಲೆ ಓದಲಾದ (2)ರ ಕರ್ನಾಟಕ ಭೂ ಮಂಜೂರಾತಿ (ತಿದ್ದುಪಡಿ) ನಿಯಮಗಳು 2015ರ ನಿಯಮ 22A (3)(i) ರಲ್ಲಿ for all Government Department the Land shall be Granted on free of cost ಎಂದು ತಿಳಿಸಲಾಗಿದೆ.

ಮೇಲೆ ಓದಲಾದ (3) ರಲ್ಲಿ ಸರ್ಕಾರಿ ಜಮೀನನ್ನು ಒಂದು ಇಲಾಖೆ/ನಿಗಮ/ಮಂಡಳಿಯಿಂದ ಇನ್ನೊಂದು ಇಲಾಖೆ/ನಿಗಮ/ಮಂಡಳಿಗೆ ಹಸ್ತಾಂತರಿಸಬೇಕಾದ ಸಂದರ್ಭಗಳಲ್ಲಿ ಜಮೀನನ್ನು ನೀಡುವ ಮತ್ತು ಪಡೆಯುವ ಇಲಾಖೆಗಳು ಪರಸ್ಪರ ಸಮಾಲೋಚಿಸಿ ಸಂಬಂಧಪಟ್ಟ ಇಲಾಖಾ ಸಚಿವರುಗಳ ಒಪ್ಪಿಗೆಯೊಂದಿಗೆ ಜಮೀನನ್ನು ನಿಯಮಾನುಸಾರ ಹಸ್ತಾಂತರಿಸುವುದು ಎಂದು ತಿಳಿಸಲಾಗಿದೆ.

ಮೇಲಿನ ವಿವರಗಳ ಹಿನ್ನೆಲೆಯಲ್ಲಿ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಜಸಂಇ 15 ಎಂಟಿಪಿ 2022,**

**ಬೆಂಗಳೂರು, ದಿನಾಂಕ:01.04.2022.**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಬಳ್ಳಾರಿ ಜಿಲ್ಲೆಯ ಹಡಗಲಿ ತಾಲ್ಲೂಕಿನ ಅಲ್ಲೀಪುರ (ತಿಮ್ಲಾಪುರ-63) ಗ್ರಾಮದಲ್ಲಿ ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ಕರ್ನಾಟಕದಡಿಯಲ್ಲಿ ಉನ್ನತೀಕರಿಸಿದ ಪ್ರೌಢ ಶಾಲೆಯ ಕಟ್ಟಡವನ್ನು ನಿರ್ಮಾಣ ಮಾಡಲು ಕರ್ನಾಟಕ ನೀರಾವರಿ ನಿಗಮಕ್ಕೆ ಸೇರಿದ ಉದ್ಯಾನದ ಜಾಗದಲ್ಲಿ 60 ಮೀಟರ್ X 24 ಮೀಟರ್ (14 ಗುಂಟೆ 04 ಅಣೆ) ಜಾಗವನ್ನು ಕರ್ನಾಟಕ ಭೂ ಮಂಜೂರಾತಿ (ತಿದ್ದುಪಡಿ) ನಿಯಮಗಳು 2015ರ ನಿಯಮ 22A (3)(i) ರಂತೆ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಗೆ ಉಚಿತವಾಗಿ ಹಸ್ತಾಂತರಿಸಲು



Generated from eOffice by HEMANTHAKUMARA . T M, WRD-SO(HTM), SECTION OFFICER, WATER RESOURCE SEC on 02/08/2022 12:12 PM

ಸರ್ಕಾರದ ಅನುಮೋದನೆ ನೀಡಲಾಗಿದೆ.

ಈ ಆದೇಶವನ್ನು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯು ದಿನಾಂಕ:09.03.2022ರಂದು ನೀಡಿದ ಸಹಮತಿಯನ್ವಯ ಹಾಗೂ ಕರ್ನಾಟಕ ಭೂ ಮಂಜೂರಾತಿ (ತಿದ್ದುಪಡಿ) ನಿಯಮಗಳು 2015ರ ನಿಯಮ 22A (3)(i) ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

Shubha K 01/04/2022

**(ಶುಭಾ ಕೆ.)**
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ).
ಜಲಸಂಪನ್ಮೂಲ ಇಲಾಖೆ, (ತಾಂತ್ರಿಕ-1).

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ, ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು, (ಆರ್ಥಿಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು, (ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ) ಕರ್ನಾಟಕ ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
8. ಮುಖ್ಯ ಇಂಜಿನಿಯರ್, ನೀರಾವರಿ ಕೇಂದ್ರ ವಲಯ, ಮುನಿರಾಬಾದ್.
9. ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಜಲಸಂಪನ್ಮೂಲ ಇಲಾಖೆ.
10. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, (ಕೃ.ಭಾ.ಜ.ನಿ.) ಜ.ಸಂ. ಇಲಾಖೆ.
11. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.



Generated from eOffice by HEMANTHAKUMARA . T M, WRD-SO(HTM), SECTION OFFICER, WATER RESOURCE SEC on 02/08/2022 12:12 PM